ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿಸಿ ನಂ.238/2023

ಚಾಸಾ:5 ಫ್ರಾಸಾ:4

ದಿನಾಂಕಃ 04.11.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ಪಾಪು |
| ಗಂಡನ ಹೆಸರು– | ರವಿ |
| ವಯಸ್ಸು – | 59 ವರ್ಷ |
| ಉದ್ಯೋಗ– | ಗೃಹಿಣಿ |
| ವಾಸ– | ಕೆಜಿಎಫ್ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಸಾಕ್ಷಿಗೆ ನಿಪಿ–**7** ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯನ್ನು ಗುರುತಿಸಲು ಕೇಳಿದ ಮೇರೆಗೆ ಅವರು ತಮ್ಮ ಸಹಿಯನ್ನು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ಈಗ ನಿಪಿ–**7**(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸರು ಈಗ ಸುಮಾರು **1** ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ ಮತ್ತು ನನಗೆ ನಿಪಿ–**7** ರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಮಾಲನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 12.10.2022 ರಂದು ಮಧ್ಯಾಹ್ನ 2.30 ರಿಂದ 3.30 ಗಂಟೆಯವರೆಗೆ ಪೋಲೀಸರು ನನ್ನ ಸಮಕ್ಷಮ ನಿಪಿ–7 ರಂತೆ ಸ್ಥಳ ಪಂಚನಾಮೆ ಮಾಡಿ ಮಾಲನ್ನು ವಶಪಡಿಸಿಕೊಂಡು ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–7 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**<u>ಮರು ವಿಚಾರಣೆಃ</u>** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿಸಿ ನಂ.238/2023

ಚಾಸಾ:3 ಪ್ರಾಸಾ:3

ದಿನಾಂಕಃ 04.11.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ಆರ್. ಸಂಪತ್ ಕುಮಾರ್ |
| ತಂದೆಯ ಹೆಸರು– | ಎಂ. ರವಿ |
| ವಯಸ್ಸು – | 37 ವರ್ಷ |
| ಉದ್ಯೋಗ– | ಖಾಸಗಿ ಕೆಲಸ |
| ವಾಸ– | ಕೆಜಿಎಫ್ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

1. ಸಾಕ್ಷಿಗೆ ನಿಪಿ–2, ಆರೋಪಿತರು ಕಳವು ಮಾಡಿದ ಸ್ಥಳದ ಪಂಚನಾಮೆ ಹಾಗೂ ಬೆಳ್ಳಿಯ ಕಾಲು ಚೈನುಗಳು ಬಿದ್ದು ಹೋದ ಸ್ಥಳದ ಪಂಚನಾಮೆಯನ್ನು ತೋರಿಸಿ ಅವುಗಳಲ್ಲಿರುವ ಸಹಿಗಳನ್ನು ಗುರುತಿಸಲು ಕೇಳಿದ ಮೇರೆಗೆ ಅವರು ತಮ್ಮ ಸಹಿಗಳನ್ನು ಗುರುತಿಸಿದ್ದು ಆರೋಪಿತರು ಕಳವು ಮಾಡಿದ ಸ್ಥಳದ ಪಂಚನಾಮೆ ಹಾಗೂ ಬೆಳ್ಳಿಯ ಕಾಲು ಚೈನುಗಳು ಬಿದ್ದು ಹೋದ ಸ್ಥಳದ ಪಂಚನಾಮೆಯನ್ನು ಕ್ರಮವಾಗಿ ನಿಪಿ-7 ಮತ್ತು 8 ಹಾಗೂ ಅವುಗಳಲ್ಲಿರುವ ಮತ್ತು ನಿಪಿ–2 ರಲ್ಲಿರುವ ಸಾಕ್ಷಿಯ ಸಹಿಗಳನ್ನು ಈಗ ನಿಪಿ–2(ಸಿ), ನಿಪಿ–7(ಎ) ಮತ್ತು ನಿಪಿ–8(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಪೋಲೀಸರು ಈಗ ಸುಮಾರು 1 ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ ಮತ್ತು ನನಗೆ ನಿಪಿ–2, 7 ಮತ್ತು 8 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ದಾಖಲೆಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ. ಅದೇ ರೀತಿ ಪೋಲೀಸರು ನನ್ನನ್ನು ವಿಚಾರಣೆ ಮಾಡಿ ನನ್ನ ಹೇಳಿಕೆ ಪಡೆದುಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 11.07.2022 ರಂದು ಸಂಜೆ 6.15 ರಿಂದ 7.00 ಗಂಟೆಯವರೆಗೆ ಪೋಲೀಸರು ನನ್ನ ಸಮಕ್ಷಮ ನಿಪಿ–2 ರಂತೆ ಸ್ಥಳ ಪಂಚನಾಮೆ ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ದಿನಾಂಕ 12.10.2022 ರಂದು ಮಧ್ಯಾಹ್ನ 2.30 ರಿಂದ 3.30 ಗಂಟೆಯವರೆಗೆ ಪೋಲೀಸರು ನನ್ನ ಸಮಕ್ಷಮ ನಿಪಿ–7 ರಂತೆ

ಹಾಗು ಮಧ್ಯಾಹ್ನ 3.45 ರಿಂದ 4.30 ಗಂಟೆವರೆಗೆ ನಿಪಿ–8 ರಂತೆ ಪಂಚನಾಮೆಗಳನ್ನು ಮಾಡಿ ನನ್ನ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

3. ಅದೇ ರೀತಿ ದಿನಾಂಕ 12.07.2022 ರಂದು ಪೋಲೀಸರು ನನ್ನನ್ನು ವಿಚಾರಣೆ ಮಾಡಿ ಈಗ ನನಗೆ ಓದಿ ಹೇಳಿದ ಹಾಗೆ ನನ್ನ ಹೇಳಿಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಈಗ ನಿಪಿ–9 ಎಂದು ಗುರುತಿಸಲಾಯಿತು. ನಿಪಿ–2 ಮತ್ತು 7 ರಿಂದ 9 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿಸಿ ನಂ.238/2023

ಚಾಸಾ:2 ಪ್ರಾಸಾ:2

ದಿನಾಂಕಃ 04.11.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ರಘು ಬಿ. |
| ತಂದೆಯ ಹೆಸರು– | ಭದ್ರ |
| ವಯಸ್ಸು – | 56 ವರ್ಷ |
| ಉದ್ಯೋಗ– | ಖಾಸಗಿ ಕೆಲಸ |
| ವಾಸ– | ಕೆಜಿಎಫ್ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಸಾಕ್ಷಿಗೆ ನಿಪಿ–**2** ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯನ್ನು ಗುರುತಿಸಲು ಕೇಳಿದ ಮೇರೆಗೆ ಅವರು ತಮ್ಮ ಸಹಿಯನ್ನು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ಈಗ ನಿಪಿ–**2**(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸರು ಈಗ ಸುಮಾರು **1** ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ ಮತ್ತು ನನಗೆ ನಿಪಿ–**2** ರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ದಾಖಲೆಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 11.07.2022 ರಂದು ಸಂಜೆ 6.15 ರಿಂದ 7.00 ಗಂಟೆಯವರೆಗೆ ಪೋಲೀಸರು ನನ್ನ ಸಮಕ್ಷಮ ನಿಪಿ–2 ರಂತೆ ಸ್ಥಳ ಪಂಚನಾಮೆ ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**<u>ಮರು ವಿಚಾರಣೆಃ</u>** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿ.ಸಿ.ನಂ.238/2023

ಚಾಸಾ: 1 ಫ್ರಾಸಾ:1

ದಿನಾಂಕಃ 04.11.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ರಮೇಶ್ ಎಂ. |
| ತಂದೆಯ ಹೆಸರು– | ಮನೀಲ |
| ವಯಸ್ಸು – | 53 ವರ್ಷ |
| ಉದ್ಯೋಗ– | ಖಾಸಗಿ ಕೆಲಸ |
| ವಾಸ– | ಕೆಜಿಎಫ್ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

1. ನನಗೆ ಆರೋಪಿತರ ಪರಿಚಯವಿರುವುದಿಲ್ಲ. ದಿನಾಂಕ 10.07.2022 ರಂದು ನಮ್ಮ ಮನೆಯಿಂದ ಚಿನ್ನದ ಆಭರಣಗಳು ಕಳ್ಳತನವಾಗಿದ್ದು ಆ ಕುರಿತು ನಾನು ಪೋಲೀಸರಿಗೆ ದೂರು ಸಲ್ಲಿಸಿದ್ದೆ. ಈಗ ನಾನು ನೋಡುತ್ತಿರುವ ದಾಖಲೆಯು ನಾನು ಪೋಲೀಸರಿಗೆ ಸಲ್ಲಿಸಿದ್ದ ದೂರು ಆಗಿದ್ದು ಅದನ್ನು ಈಗ ನಿಪಿ–1 ಹಾಗೂ ನನ್ನ ಸಹಿಯನ್ನು ನಿಪಿ–1(ಎ) ಎಂದು ಗುರುತಿಸಲಾಯಿತು.

2. ನಾನು ದೂರು ಸಲ್ಲಿಸಿದ ನಂತರ ಪೋಲೀಸರು ಘಟನಾ ಸ್ಥಳಕ್ಕೆ ಬಂದು ಸ್ಥಳ ಪಂಚನಾಮೆ ಬರೆದು ಅದರ ಮೇಲೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಈಗ ನಾನು ನೋಡುತ್ತಿರುವ ದಾಖಲೆಯು ಪೋಲೀಸರು ಬರೆದ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗ ನಿಪಿ–2 ಹಾಗೂ ನನ್ನ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು.

3. ಚಿನ್ನದ ಆಭರಣಗಳನ್ನು ಯಾರು ಕಳ್ಳತನ ಮಾಡಿದ್ದರು ಎಂದು ನನಗೆ ಗೊತ್ತಿರುವುದಿಲ್ಲ. ಕಳ್ಳತನವಾದ ಆಭರಣಗಳನ್ನು ಪೋಲೀಸರು ಹುಡುಕಿ ನನಗೆ ಕೊಟ್ಟಿರುತ್ತಾರೆ. ಪೋಲೀಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನ ಮರುಹೇಳಿಕೆ ಪಡೆದುಕೊಂಡಿರುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

4. ಪೋಲೀಸರು ದಿನಾಂಕ 11.07.2022 ರಂದು ಸಂಜೆ 6.15 ರಿಂದ 7.00 ಗಂಟೆವರೆಗೆ ಘಟನಾ ಸ್ಥಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿ. ಪೋಲೀಸರು ಆಭರಣಗಳನ್ನು ನನಗೆ ಬಿಡುಗಡೆ ಮಾಡುವಾಗ ಪೋಟೋಗಳನ್ನು ತೆಗೆದುಕೊಂಡಿದ್ದರು ಎಂದರೆ ಸರಿ. ಸದರಿ ಪೋಟೋಗಳನ್ನು ಸಾಕ್ಷಿಯು ಗುರುತಿಸಿರುವುದರಿಂದ ಅವುಗಳನ್ನು ನಿಪಿ–3 ರಿಂದ 6 ಎಂದು ಗುರುತಿಸಲಾಯಿತು. ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿತರೇ ನಮ್ಮ ಮನೆಯಿಂದ ಆಭರಣಗಳನ್ನು ಕಳ್ಳತನ ಮಾಡಿರುತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್